15

# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ರಾಜ್ಯದ ಎಲ್ಲಾ ಶಾಲಾ ಕಾಲೇಜುಗಳಲ್ಲಿ ಎಸ್.ಎಸ್.ಎಲ್.ಸಿ. ಹಾಗೂ ನಂತರ ವ್ಯಾಸಂಗ ಮಾಡುತ್ತಿರುವ ಅಂಧ ವಿದ್ಯಾರ್ಥಿಗಳಿಗೆ ಟಾಕಿಂಗ್ ಲ್ಯಾಪ್ ಟಾಪ್ ಒದಗಿಸುವ ಬಗ್ಗೆ.

**ಓದಲಾಗಿದೆ:**
1. ಸರ್ಕಾರದ ಆದೇಶ ಸಂಖ್ಯೆ : ಮಮಇ 113 ಪಿಹೆಚ್ ಪಿ 2014, ದಿನಾಂಕ: 03.07.2014.
2. ರಿಟ್ ಅರ್ಜಿ ಸಂಖ್ಯೆ: 12229/2020 ರಲ್ಲಿ ಮಾನ್ಯ ಉಚ್ಚ ನ್ಯಾಯಾಲಯವು ದಿನಾಂಕ: 08.01.2021 ರಂದು ನೀಡಿರುವ ಆದೇಶ.
3. ಸರ್ಕಾರದ ಸುತ್ತೋಲೆ ಸಂಖ್ಯೆ : ಮಮಇ 01 ಪಿಹೆಚ್ ಪಿ 2021, ದಿನಾಂಕ: 15.03.2021.
4. ರಿಟ್ ಅರ್ಜಿ ಸಂಖ್ಯೆ: 12229/2020 ರಲ್ಲಿ ಮಾನ್ಯ ಉಚ್ಚ ನ್ಯಾಯಾಲಯವು ದಿನಾಂಕ: 18.03.2021 ರಂದು ನೀಡಿರುವ ಆದೇಶ.

**ಪ್ರಸ್ತಾವನೆ:**

2014-15ನೇ ಸಾಲಿನ ಆಯವ್ಯಯ ಭಾಷಣದಲ್ಲಿ ರಾಜ್ಯದ ಎಲ್ಲಾ ಶಾಲಾ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಅಂಧ ವಿದ್ಯಾರ್ಥಿಗಳು ಇತ್ತೀಚಿನ ತಂತ್ರಜ್ಞಾನ ಮತ್ತು ತಂತ್ರಾಂಶದ ಉಪಯೋಗದಿಂದ ಉನ್ನತ ಶಿಕ್ಷಣ ಪಡೆಯಲು ಅನುಕೂಲವಾಗಲು ಟಾಕಿಂಗ್ ಲ್ಯಾಪ್‌ಟಾಪ್‌ಗಳನ್ನು ಒದಗಿಸುವ ಯೋಜನೆಯನ್ನು ಘೋಷಿಸಲಾಗಿತ್ತು. ಮೇಲೆ ಕ್ರಮ ಸಂಖ್ಯೆ 1ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ಈ ಯೋಜನೆಗೆ ತಗಲುವ ವೆಚ್ಚ ರೂ. 400.00 ಲಕ್ಷಗಳ ಅನುದಾನನ್ನು ಬಿಡುಗಡೆ ಮಾಡಿ ಆಡಳಿತಾತ್ಮಕ ಮಂಜೂರಾತಿ ನೀಡಲಾಗಿತ್ತು. ಈ ಯೋಜನೆಯನ್ನು 2014-15 ರಿಂದ 2020-21ನೇ ಸಾಲಿನವರೆಗೆ ನಿರಂತರವಾಗಿ ಮುಂದುವರೆಸಿರುತ್ತದೆ.

ಮೇಲೆ ಕ್ರಮ ಸಂಖ್ಯೆ 2ರಲ್ಲಿ ಓದಲಾದ ಮಾನ್ಯ ಉಚ್ಚ ನ್ಯಾಯಾಲಯದ ಮಧ್ಯಂತರ ಆದೇಶದಲ್ಲಿ ರಾಜ್ಯದ ಎಲ್ಲಾ ಶಾಲಾ ಕಾಲೇಜುಗಳಲ್ಲಿ ಎಸ್.ಎಸ್.ಎಲ್.ಸಿ. ಹಾಗೂ ನಂತರ ವ್ಯಾಸಂಗ ಮಾಡುತ್ತಿರುವ ಅಂಧ ವಿದ್ಯಾರ್ಥಿಗಳಿಗೆ ಟಾಕಿಂಗ್ ಲ್ಯಾಪ್ ಟಾಪ್ ಯೋಜನೆ ಲಭ್ಯವಿರುವ ಬಗ್ಗೆ ಕೂಡಲೇ ತಿಳುವಳಿಕೆ ನೀಡಲು ಅಗತ್ಯ ಕ್ರಮವಹಿಸುವಂತೆ ಸೂಚಿಸಲಾಗಿತ್ತು.

ಮಾನ್ಯ ಉಚ್ಚ ನ್ಯಾಯಾಲಯದ ಮಧ್ಯಂತರ ಆದೇಶದನ್ವಯ ರಾಜ್ಯದ ಎಲ್ಲಾ ಶಾಲಾ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಅಂಧ ವಿದ್ಯಾರ್ಥಿಗಳಿಗೆ ಲ್ಯಾಪ್‌ಟಾಪ್ ಯೋಜನೆ ಲಭ್ಯವಿರುವ ಬಗ್ಗೆ ತಿಳುವಳಿಕೆ ನೀಡಲು ಹಾಗೂ ಯೋಜನೆಯ ಸಂಬಂಧ ಕಾಲಕಾಲಕ್ಕೆ ಹೊರಡಿಸಲಾಗುವ ಆದೇಶ / ಸುತ್ತೋಲೆ / ಅಧಿಸೂಚನೆಗಳ ಮಾಹಿತಿಯನ್ನು ಸಕಾಲದಲ್ಲಿ ಅಂಧ ವಿದ್ಯಾರ್ಥಿಗಳ ಗಮನಕ್ಕೆ ತರಲು ಮೇಲೆ ಕ್ರಮ ಸಂಖ್ಯೆ 3ರಲ್ಲಿ ಓದಲಾದ ಸುತ್ತೋಲೆಯಲ್ಲಿ ಈ ಕೆಳಕಂಡವರಿಗೆ ಜವಾಬ್ದಾರಿ ನಿಗಧಿಪಡಿಸಲಾಗಿದೆ. ಈ ಕುರಿತು ಕೈಗೊಂಡ ಕ್ರಮದ ಮಾಹಿತಿಯನ್ನು ಪ್ರತಿ ತಿಂಗಳು ತಪ್ಪದೇ ನಿರ್ದೇಶಕರು, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಇಲಾಖೆ ಇವರಿಗೆ ಸಲ್ಲಿಸುವಂತೆ ಸಹ ತಿಳಿಸಲಾಗಿದೆ.

1. ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆಯ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು.
2. ಎಲ್ಲಾ ತಾಲ್ಲೂಕು ಪಂಚಾಯಿತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು.
3. ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಇಲಾಖೆಯಿಂದ ಅನುದಾನ ಪಡೆಯುವ ಎಲ್ಲಾ ಸ್ವಯಂ ಸೇವಾ ಸಂಸ್ಥೆಗಳು.
4. ರಾಜ್ಯದ ಎಲ್ಲಾ ಅಂಗನವಾಡಿಗಳ ಕಾರ್ಯಕರ್ತೆಯರು.
5. ವಿ.ಆರ್.ಡಬ್ಲ್ಯೂ, ಯೂ.ಆರ್.ಡಬ್ಲ್ಯೂ ಹಾಗೂ ಎಂ.ಆರ್.ಡಬ್ಲ್ಯೂ ಕಾರ್ಯಕರ್ತರು.

ಮೇಲೆ ಕ್ರಮ ಸಂಖ್ಯೆ 4ರಲ್ಲಿ ಓದಲಾದ ಆದೇಶದಲ್ಲಿ, ಮಾನ್ಯ ಉಚ್ಚ ನ್ಯಾಯಾಲಯವು ರಾಜ್ಯದ ಎಲ್ಲಾ ಶಾಲಾ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಅಂಧ ವಿದ್ಯಾರ್ಥಿಗಳಿಗೆ ಲ್ಯಾಪ್‌ಟಾಪ್ ವಿತರಿಸಲು ಸಮಗ್ರ ಯೋಜನೆಯನ್ನು ರೂಪಿಸುವಂತೆ ಸೂಚಿಸಿರುತ್ತದೆ.

ಮೇಲಿನ ಎಲ್ಲಾ ಅಂಶಗಳನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಮಮಇ 01 ಪಿಹೆಚ್‌ಪಿ 2021, ಬೆಂಗಳೂರು, ದಿನಾಂಕ: 26.07.2021**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ರಾಜ್ಯದ ಎಲ್ಲಾ ಶಾಲಾ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಅಂಧ ವಿದ್ಯಾರ್ಥಿಗಳಿಗೆ ಟಾಕಿಂಗ್ ಲ್ಯಾಪ್‌ಟಾಪ್ ವಿತರಿಸಲು ಈ ಕೆಳಕಂಡ ಷರತ್ತುಗಳು ಹಾಗೂ ಅಂಶಗಳನ್ನೊಳಗೊಂಡಂತೆ ಸಮಗ್ರ ಯೋಜನೆಯನ್ನು ರಚಿಸಿ ಆದೇಶಿಸಲಾಗಿದೆ.

1. ರಾಜ್ಯದಲ್ಲಿ ಎಸ್.ಎಸ್.ಎಲ್.ಸಿ. ಹಾಗೂ ನಂತರದ ತರಗತಿಗಳಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ಅಂಧ ವಿದ್ಯಾರ್ಥಿಗಳು ಭಾರತದ ಪ್ರಜೆಯಾಗಿರಬೇಕು ಮತ್ತು ಕರ್ನಾಟಕದಲ್ಲಿ 10-ವರ್ಷಗಳಿಂದ ವಾಸವಾಗಿರುವ ಕುರಿತು ತಹಶೀಲ್ದಾರರಿಂದ ಪ್ರಮಾಣ ಪತ್ರ ಪಡೆದುಕೊಂಡು ಸಲ್ಲಿಸತಕ್ಕದ್ದು.
2. ರಾಜ್ಯದಲ್ಲಿ ಎಸ್.ಎಸ್.ಎಲ್.ಸಿ ಹಾಗೂ ನಂತರದ ತರಗತಿಗಳಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ಅಂಧ ವಿದ್ಯಾರ್ಥಿಗಳಿಗೆ ಮಾತ್ರ ಟಾಕಿಂಗ್ ಲ್ಯಾಪ್ ಟಾಪ್ ಒದಗಿಸಲಾಗುವುದು.
3. ಟಾಕಿಂಗ್ ಲ್ಯಾಪ್ ಟಾಪ್ ಪಡೆಯಲು ಅರ್ಹ ಅಂಧ ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿರುವ ಸಂಸ್ಥೆ / ಕಾಲೇಜು ಮುಖ್ಯಸ್ಥರಿಂದ ನಿಗದಿತ ನಮೂನೆಯಲ್ಲಿ ದೃಢಿಕೃತ ಶಿಫಾರಸ್ಸಿನೊಂದಿಗೆ ಅರ್ಜಿ ಸಲ್ಲಿಸತಕ್ಕದ್ದು.
4. ಈ ಉದ್ದೇಶಕ್ಕಾಗಿ, ಜಿಲ್ಲಾ ಮಟ್ಟದಲ್ಲಿ ಉಪ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ಉಪ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ. ಅಂಧ ಮಕ್ಕಳ ಕ್ಷೇತ್ರದಲ್ಲಿ ತೊಡಗಿಸಿಕೊಂಡಿರುವ 1-2 ಸ್ವಯಂ ಸೇವಾ ಸಂಸ್ಥೆಗಳ ಮುಖ್ಯಸ್ಥರನ್ನು ಒಳಗೊಂಡಿರುವ ಜಿಲ್ಲಾ ಮಟ್ಟದ ಸಮಿತಿಯು ಫಲಾನುಭವಿಗಳನ್ನು ಆಯ್ಕೆ ಮಾಡತಕ್ಕದ್ದು. ಈ ಸಮಿತಿಗೆ ಜಿಲ್ಲಾ ಅಂಗವಿಕಲ ಕಲ್ಯಾಣಾಧಿಕಾರಿಗಳು ಸದಸ್ಯ- ಕಾರ್ಯದರ್ಶಿಗಳಾಗಿರತಕ್ಕದ್ದು.
5. ಈ ಯೋಜನೆಯ ಸೌಲಭ್ಯ ಪಡೆಯಲು ಯಾವುದೇ ಆದಾಯದ ಮಿತಿ ಇರುವುದಿಲ್ಲ.
6. ಸರ್ಕಾರ ಒದಗಿಸುವ ಲ್ಯಾಪ್ ಟಾಪ್ ನ್ನು ಯಾವುದೇ ಕಾರಣಕ್ಕೂ ಪರಭಾರೆ ಮಾಡಬಾರದು. ಪರಭಾರೆ ಮಾಡುವುದು ಕಂಡು ಬಂದರೆ ಅಂಥವರ ಮೇಲೆ ಕ್ರಮವಹಿಸಿ ಸರ್ಕಾರಕ್ಕೆ ಮುಟ್ಟುಗೋಲು ಮಾಡಿಕೊಳ್ಳಲಾಗುವುದು.
7. ಈ ಸೌಲಭ್ಯ ಪಡೆದುಕೊಳ್ಳುವ ವಿದ್ಯಾರ್ಥಿಗಳು ರೂ.100/- ಛಾಪಾಕಾಗದದಲ್ಲಿ ಮುಚ್ಚಳಿಕೆ ಬರೆದು ಕೊಡತಕ್ಕದ್ದು. ಈ ಉದ್ದೇಶಕ್ಕಾಗಿ ಜಿಲ್ಲಾ ಅಂಗವಿಕಲ ಕಲ್ಯಾಣಾಧಿಕಾರಿಗಳು/ ಅವರ ಕಚೇರಿಯ ಸಿಬ್ಬಂದಿಗಳು ಅಂಧ ವಿದ್ಯಾರ್ಥಿಗಳಿಗೆ ಅಗತ್ಯವಿರುವ ಸಹಾಯ ಮಾಡತಕ್ಕದ್ದು.
8. ಈ ಸೌಲಭ್ಯವನ್ನು ಪಡೆಯುವ ಅಂಧ ವಿದ್ಯಾರ್ಥಿಗಳು ಶೇಕಡಾ 40ಕ್ಕಿಂತ ಹೆಚ್ಚು ದೃಷ್ಟಿದೋಷವುಳ್ಳವರಾಗಿತಕ್ಕದ್ದು.
9. ಅಂಗವಿಕಲರ ಅಧಿನಿಯಮದಲ್ಲಿ ಸೂಚಿಸಿರುವ ಹಾಗೂ ವೈದ್ಯಕೀಯ ಪ್ರಾಧಿಕಾರವು ನೀಡಿರುವ ಗುರುತಿನ ಚೀಟಿಯೊಂದಿಗೆ ಶಿಫಾರಸ್ಸು ಮಾಡಿರುವ ಧೃಡೀಕೃತ ವೈದ್ಯಕೀಯ ಪ್ರಮಾಣ ಪತ್ರವನ್ನು ಸಲ್ಲಿಸತಕ್ಕದ್ದು.
10. ಟಾಕಿಂಗ್ ಲ್ಯಾಪಟಾಪ್ ನ್ನು ವಿದ್ಯಾರ್ಥಿಗಳು ಅವರ ಶಿಕ್ಷಣದ ಉದ್ದೇಶಕ್ಕಾಗಿಯೇ ಉಪಯೋಗಿಸತಕ್ಕದ್ದು.
11. ಈ ಸೌಲಭ್ಯಕ್ಕಾಗಿ ಸ್ವೀಕರಿಸಲಾಗುವ ಅರ್ಜಿಗಳನ್ನು ಜೇಷ್ಠತೆ ಅನುಸಾರ ಪರಿಗಣಿಸಲಾಗುವುದು.
12. ನಿಯತಕಾಲಿಕ ವಿದ್ಯಾರ್ಥಿಗಳು ಮಾತ್ರ ಈ ಯೋಜನ ಸೌಲಭ್ಯ ಪಡೆಯಲು ಅರ್ಹರಿರುತ್ತಾರೆ.

......3

13. ಲ್ಯಾಪಟಾಪ್ ನ್ನು ಒಂದು ವಿದ್ಯಾರ್ಥಿಗೆ ಜೀವಿತಕಾಲದಲ್ಲಿ ಒಂದು ಬಾರಿ ಮಾತ್ರ ಪಡೆಯಲು ಅರ್ಹರಾಗಿರುತ್ತಾರೆ. ಈ ಸೌಲಭ್ಯವನ್ನು ಬೇರೆ ಇಲಾಖೆಯಿಂದ ಅಥವಾ ಸಂಘ ಸಂಸ್ಥೆಗಳಿಂದ ಪಡೆದಿದ್ದಲ್ಲಿ ಅಂಥವರು ಅರ್ಹರಾಗಿರುವುದಿಲ್ಲ.
14. ಈ ಯೋಜನೆಯನ್ನು ಅನುಷ್ಠಾನಗೊಳಿಸುವ ಜವಾಬ್ದಾರಿಯು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳದ್ದಾಗಿರುತ್ತದೆ. ಆದ್ದರಿಂದ, ಈ ಯೋಜನೆಯ ಸೌಲಭ್ಯ ಪಡೆಯಲು ಅಂಧ ವಿದ್ಯಾರ್ಥಿಗಳು ಮೇಲಿನ ಷರತ್ತುಗಳನ್ನು ಅನುಸರಿಸಿ, ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳಿಗೆ ಸಲ್ಲಿಸತಕ್ಕದ್ದು.
15. ಈ ಉದ್ದೇಶಕ್ಕಾಗಿ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳ ಕಚೇರಿಗೆ ಭೇಟಿ ಮಾಡುವ ಅಂಧ ವಿದ್ಯಾರ್ಥಿಗಳಿಗೆ / ಅವರ ಪೋಷಕರಿಗೆ ಕುಳಿತುಕೊಳ್ಳಲು ಸೂಕ್ತ ವ್ಯವಸ್ಥೆ ಮಾಡತಕ್ಕದ್ದು ಹಾಗೂ ನಿಗದಿತ ಅರ್ಜಿ ನಮೂನೆಗಳನ್ನು ಅವರಿಗೆ ಒದಗಿಸಿ, ಅವುಗಳನ್ನು ಭರ್ತಿ ಮಾಡಲು ಅಗತ್ಯ ಸಹಾಯ ಮಾಡಲು ಕಚೇರಿಯ ಸಿಬ್ಬಂದಿಯೊಬ್ಬರಿಗೆ ಸೂಚಿಸತಕ್ಕದ್ದು.
16. ಮೇಲೆ ಕ್ರಮ ಸಂಖ್ಯೆ (2) ರಲ್ಲಿ ಓದಲಾದ ಸರ್ಕಾರದ ಸುತ್ತೋಲೆಯಲ್ಲಿ ಅಂಧ ವಿದ್ಯಾರ್ಥಿಗಳಿಗೆ ಯಾವುದೇ ಶುಲ್ಕವಿಲ್ಲದೇ ಒದಗಿಸುವ ಟಾಕಿಂಗ್ ಲ್ಯಾಪಟಾಪ್ ಯೋಜನೆಯ ಲಭ್ಯತೆ ಕುರಿತು ತಿಳುವಳಿಗೆ/ ಮಾಹಿತಿ ನೀಡುವಂತೆ ಸಂಬಂಧಿಸಿದ ಜಿಲ್ಲಾ ಮಟ್ಟದ / ತಾಲ್ಲೂಕು ಮಟ್ಟದ/ ಗ್ರಾಮ ಪಂಚಾಯಿತಿ ಮಟ್ಟದ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ. ಈ ಸೂಚನೆಗಳನ್ನು ಆ ಎಲ್ಲಾ ಅಧಿಕಾರಿಗಳು ಪಾಲಿಸತಕ್ಕದ್ದು. ಈ ಸುತ್ತೋಲೆಯನ್ನು ಈ ಆದೇಶದ ಒಂದು ಭಾಗವೆಂದು ಪರಿಗಣಿಸತಕ್ಕದ್ದು. ಅಲ್ಲದೆ ಈ ಸೌಲಭ್ಯದ ಲಭ್ಯತೆ ಕುರಿತು ಜಿಲ್ಲಾ ಮಾಹಿತಿ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಅಧಿಕಾರಿಗಳ ಸಹಕಾರದೊಂದಿಗೆ ಸ್ಥಳೀಯ ಮತ್ತು ಕೆಲವು ಪ್ರಮುಖ ದಿನ ಪತ್ರಿಕೆಯಲ್ಲಿ ಪ್ರಕಟಣೆ ಹೊರಡಿಸತಕ್ಕದ್ದು.
17. ಈ ಉದ್ದೇಶಕ್ಕಾಗಿ ಪ್ರತಿ ವರ್ಷ ಸೆಪ್ಟೆಂಬರ್- ಅಕ್ಟೋಬರ್ ತಿಂಗಳಲ್ಲಿ ಜಿಲ್ಲಾ ಮಟ್ಟದ ಸಮಿತಿಯ ಸಭೆಯಲ್ಲಿ ಅಂಧ ವಿದ್ಯಾರ್ಥಿಗಳ ಆಯ್ಕೆ ಪ್ರಕ್ರಿಯೆಯನ್ನು ಅಂತಿಮಗೊಳಿಸಿ, ಇಲಾಖಾ ಮುಖ್ಯಸ್ಥರ ಮೂಲಕ ಅಗತ್ಯ ಸಂಖ್ಯೆಯ ಟಾಕಿಂಗ್ ಲ್ಯಾಪಟಾಪ್ ಖರೀದಿಸಲು ಅನುದಾನ ಬಿಡುಗಡೆಗಾಗಿ ಪ್ರಸ್ತಾವನೆಯನ್ನು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು ಸಲ್ಲಿಸತಕ್ಕದ್ದು. ಈ ವಿಷಯದಲ್ಲಿ ಕರ್ತವ್ಯ ಲೋಪ ಎಸಗಿದಲ್ಲಿ ಅವರನ್ನೇ ಜವಾಬ್ದಾರನ್ನಾಗಿ ಮಾಡಿ ಸೂಕ್ತ ಕ್ರಮಜರುಗಿಸಲಾಗುವುದು.

ಈ ಯೋಜನೆಯ ಸೌಲಭ್ಯವನ್ನು ಪಡೆಯಲು ಅರ್ಹ ಅಂಧ ವಿದ್ಯಾರ್ಥಿಗಳಿಗೆ ತೊಂದರೆ/ ಅನಾನುಕೂಲವಾದಲ್ಲಿ ಜಿಲ್ಲಾಧಿಕಾರಿಗಳಿಗೆ/ ಇಲಾಖಾ ಮುಖ್ಯಸ್ಥರಿಗೆ/ ಸರ್ಕಾರಕ್ಕೆ ದೂರು ಸಲ್ಲಿಸಬಹುದಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಜಿ.ಹೆಚ್. ಸರೋಜಮ್ಮ) 26/07/2021
ಸರ್ಕಾರದ ಅಧೀನ ಕಾರ್ಯದರ್ಶಿ-2,
ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ
ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ.

**ಇವರಿಗೆ:**

1. ಪ್ರಧಾನ ಮಹಾಲೇಖಪಾಲರು (ಜಿ &ಎಸ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ,"ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು- 1.
2. ಪ್ರಧಾನ ಮಹಾಲೇಖಪಾಲರು (ಇ & ಆರ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು- 1.

3. ಪ್ರಧಾನ ಮಹಾಲೇಖಪಾಲರು (ಎ&ಇ), ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂಖ್ಯೆ:5329, ಬೆಂಗಳೂರು- 1.
4. ಸರ್ಕಾರದ ಪ್ರಧಾನ ಕಾರ್ಯದರ್ಶಿರವರು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ, ಬಹುಮಹಡಿ ಕಟ್ಟಡ.
5. ಎಲ್ಲಾ ಜಿಲ್ಲೆಗಳ ಜಿಲ್ಲಾ ಪಂಚಾಯಿತಿಗಳ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು.
6. ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
7. ನಿರ್ದೇಶಕರು, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ನಿರ್ದೇಶನಾಲಯ, ವಿಶ್ವೇಶ್ವರಯ್ಯ ಗೋಪುರ, ಪೋಡಿಯಂ ಬ್ಲಾಕ್, ಬೆಂಗಳೂರು.
8. ಆಂತರಿಕ ಆರ್ಥಿಕ ಸಲಹೆಗಾರರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ವಿಕಾಸಸೌಧ, ಬೆಂಗಳೂರು.
9. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
10. ಸರ್ಕಾರದ ಜಂಟಿ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
11. ಶಾಖಾಧಿಕಾರಿ, ಸ್ವೀಕೃತಿ ಮತ್ತು ರವಾನೆ ಶಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಬಹುಮಹಡಿಗಳ ಕಟ್ಟಡ, ಬೆಂಗಳೂರು.
12. ಶಾಖಾ ರಕ್ಷಾ ಕಡತ/ಒ.ಡಿ.ಜಿ.ಸಿ/ಸೂಚನಾ ಫಲಕ/ಹೆಚ್ಚುವರಿ ಪ್ರತಿಗಳು.

5 copy 26/7/21